ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ:ಇ-ಆಡಳಿತ ಇತರೆ 01/ 2014-15 ದಿನಾಂಕ: 16-05-2015

## ಸುತ್ತೋಲೆ

ವಿಷಯ: ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿರುವ ಕಾಗದರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಬಳಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 246 ಎಸ್‌ಟಿಬಿ 2014ದಿನಾಂಕ:15-12-2015.

ಉಲ್ಲೇಖಿತ ಸರ್ಕಾರದ ಪತ್ರ ಹಾಗೂ ಅದರೊಂದಿಗೆ ಲಗತ್ತಿಸಿದ ಪತ್ರಗಳಲ್ಲಿ ಕಾಗದರಹಿತ ಪ್ರಮಾಣ ಪತ್ರಗಳ ಸೇವೆಯನ್ನು ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ಅಳವಡಿಸುವ ಬಗ್ಗೆ, ಪ್ರಸ್ತಾಪಿಸಲಾಗಿದೆ.

ಸಾರ್ವಜನಿಕರು ತಾವು ಪಡೆಯುವ ಸೌಲಭ್ಯಕ್ಕೆ ಒದಗಿಸುವ ಪ್ರಮಾಣಪತ್ರಗಳಿಗಾಗಿ ಒಂದು ಇಲಾಖೆಯಿಂದ ಮತ್ತೊಂದು ಇಲಾಖೆಗೆ ಕಾಗದರಹಿತ ಪ್ರಮಾಣಪತ್ರಗಳ ಸೇವೆಯನ್ನು ಜಾರಿಗೊಳಿಸಲು ಆದೇಶಿಸಲಾಗಿದೆ. ಅರ್ಜಿದಾರರಿಗೆ ಪ್ರಮಾಣ ಪತ್ರದಲ್ಲಿರುವ ಗಣಕೀಕೃತ ಸಂಖ್ಯೆಯನ್ನು ಎಸ್.ಎಂ.ಎಸ್ ಮೂಲಕ ಕಳುಹಿಸಿಕೊಡಲಾಗುವುದು. ಸದರಿ ಗಣಕೀಕೃತ ಸಂಖ್ಯೆಯನ್ನು ಉಪಯೋಗಿಸಿಕೊಂಡು ಅರ್ಜಿದಾರರು ನಮೂದಿಸುವ ಮೂಲಕ ಹಾಗೂ ಭೌತಿಕವಾಗಿ ಪ್ರಮಾಣ ಪತ್ರವನ್ನು ನೀಡದೇ ಪ್ರಮಾಣ ಪತ್ರಗಳ ವಿವರಗಳನ್ನು ನಾಡ ಕಛೇರಿ ವೆಬ್‌ಸೈಟ್ ಮುಖಾಂತರ ವೀಕ್ಷಿಸಬಹುದಾಗಿದೆ.

ಅಂತೆಯೇ ಶಿಕ್ಷಣ ಇಲಾಖೆಯಲ್ಲಿ ಅರ್ಜಿದಾರರು ಸಲ್ಲಿಸುವ ಅರ್ಜಿಯಲ್ಲಿ ಸದರಿ ಪ್ರಮಾಣ ಪತ್ರಗಳ ಗಣಕೀಕೃತ ಸಂಖ್ಯೆಯನ್ನು ನಮೂದಿಸಿದಾಗ ಪ್ರಮಾಣ ಪತ್ರವನ್ನು ನೀಡದೇ ಪ್ರಮಾಣ ಪತ್ರಗಳ ವಿವರಗಳನ್ನು ನಾಡ ಕಛೇರಿ ವೆಬ್‌ಸೈಟ್ ಮುಖಾಂತರ ವೀಕ್ಷಿಸುವ ಬಗ್ಗೆ, ಈಗ ಹಾಲಿ ನಾಡ ಕಛೇರಿಯ ವೆಬ್‌ಸೈಟ್‌ನಲ್ಲಿ ನಮೂದಿಸಿರುವ ಸೇವೆಗಳಾದ 24 ಸೇವೆಗಳಲ್ಲಿ 09 ಸೇವೆಗಳನ್ನು ಶಿಕ್ಷಣ ಇಲಾಖೆಯಲ್ಲಿ ಅರ್ಜಿದಾರರು ಸಲ್ಲಿಸುವ ಅರ್ಜಿಯಲ್ಲಿ ಸದರಿ ಪ್ರಮಾಣ ಪತ್ರಗಳ ಗಣಕೀಕೃತ ಸಂಖ್ಯೆಯನ್ನು ನಮೂದಿಸಿದಾಗ ಪ್ರಮಾಣ ಪತ್ರವನ್ನು ನೀಡದೇ ಪ್ರಮಾಣ ಪತ್ರಗಳ ವಿವರಗಳನ್ನು ನಾಡ ಕಛೇರಿ ವೆಬ್‌ಸೈಟ್ ಮುಖಾಂತರ ವೀಕ್ಷಿಸಿ ಕ್ರಮವಹಿಸಲು ಈ ಮೂಲಕ ಸೂಚಿಸಿದೆ. ಹೆಚ್ಚಿನ ವಿವರಗಳಿಗೆ www.nadakacherikarnataka.gov.in ವೀಕ್ಷಿಸಲು ತಿಳಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ

1. ರಾಜ್ಯದ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
4. ರಾಜ್ಯ ಎಲ್ಲಾ ಡಯಟ್, ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ

ಪ್ರತಿಯನ್ನು

ನಿರ್ದೇಶಕರು, ಅಟಲ್ ಜನಸ್ನೇಹಿ ಕೇಂದ್ರ ಯೋಜನೆ, ಕಂದಾಯ ಇಲಾಖೆ ಕೆ.ಆರ್. ವೃತ್ತ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.